**All India Radio: Bangalore**
**National Bulletin In Kannada**
**13.07.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**13.07.2025 19.35 p.m.**
**<><><><>**

ಮುಖ್ಯಾಂಶಗಳು :

- ೭೪ ಸಾವಿರ ರೈಲ್ವೆ ಬೋಗಿಗಳು, ೧೫ ಸಾವಿರ ಲೋಕೊಮೋಟಿವ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಕೆಗೆ ರೈಲ್ವೆ ಇಲಾಖೆ ನಿರ್ಧಾರ

- ಆಪರೇಷನ್ ಸಿಂದೂರ್ ನಂತರ ಬ್ರಹ್ಮೋಸ್ ಕ್ಷಿಪಣಿಗೆ ವಿದೇಶಗಳಿಂದ ಬೇಡಿಕೆ ಹೆಚ್ಚಳ – ರಕ್ಷಣಾ ಸಚಿವ ರಾಜನಾಥ್ ಸಿಂಗ್

- ನಕಲಿ, ಕಳಪೆ ಗುಣಮಟ್ಟದ ರಸಗೊಬ್ಬರ ಸಮಸ್ಯೆ ವಿರುದ್ಧ ತ್ವರಿತ ಕ್ರಮಕ್ಕೆ ಸೂಚಿಸಿ ರಾಜ್ಯಗಳಿಗೆ ಕೇಂದ್ರ ಸರ್ಕಾರದಿಂದ ಪತ್ರ

- ವಿಂಬಲ್ಡನ್ ಟೆನಿಸ್ : ಪುರುಷರ ಸಿಂಗಲ್ಸ್ ಫೈನಲ್‌ನಲ್ಲಿಂದು ಜನಿಕ್ ಸಿನ್ನರ್ – ಕಾರ್ಲೋಸ್ ಅಲ್ಕರಾಜ್ ಮುಖಾಮುಖಿ

<><><><>

ಪ್ರಯಾಣಿಕರ ಸುರಕ್ಷತೆಯನ್ನು ಹೆಚ್ಚಿಸಲು ರೈಲಿನ ಎಲ್ಲ ಬೋಗಿಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ರೈಲ್ವೆ ನಿರ್ಧರಿಸಿದೆ. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ರವನೀತ್ ಸಿಂಗ್ ಬಿಟ್ಟು, ಲೊಕೊಮೋಟಿವ್‌ಗಳಲ್ಲಿ ಮತ್ತು ಬೋಗಿಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಕೆಯ ಪ್ರಗತಿಯನ್ನು ಪರಿಶೀಲಿಸಿದರು. ಪ್ರಯಾಣಿಕರ ಗೌಪ್ಯತೆಯನ್ನು ಕಾಪಾಡಲು ಬಾಗಿಲುಗಳ ಬಳಿ ಸಾಮಾನ್ಯ ಸಂಚಾರ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು. ಈ ಕ್ಯಾಮೆರಾಗಳು ದುಷ್ಕರ್ಮಿಗಳನ್ನು ಗುರುತಿಸಲು ಸಹಾಯ ಮಾಡುತ್ತದೆ. ಎಲ್ಲಾ ೭೪ ಸಾವಿರ ಬೋಗಿಗಳು ಮತ್ತು ೧೫ ಸಾವಿರ ಲೋಕೊಮೋಟಿವ್‌ಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅನುಮೋದನೆ ನೀಡಿದ್ದಾರೆ. ಗಂಟೆಗೆ ೧೦೦ ಕಿಲೋಮೀಟರ್ ವೇಗದಲ್ಲಿ ರೈಲು ಚಲಿಸುತ್ತಿದ್ದರೂ ಹಾಗೂ ಕಡಿಮೆ ಬೆಳಕಿನ ಪರಿಸ್ಥಿತಿಗಳಲ್ಲಿಯೂ ಸಹ ಉತ್ತಮ ಗುಣಮಟ್ಟದ ದೃಶ್ಯಾವಳಿಗಳು ಲಭ್ಯವಾಗುವ ನಿಟ್ಟಿನಲ್ಲಿ ಗುಣಮಟ್ಟದ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವಂತೆ ಅಧಿಕಾರಿಗಳಿಗೆ ರೈಲ್ವೆ ಸಚಿವರು ಸೂಚನೆ ನೀಡಿದರು.

<><><><>

ಸಮಾಜ ಸೇವಕ ಸಿ.ಸದಾನಂದನ್ ಮಾಸ್ಟರ್, ಖ್ಯಾತ ವಕೀಲ ಉಜ್ವಲ್ ದೇವರಾವ್ ನಿಕ್ಕಂ, ಮಾಜಿ ವಿದೇಶಾಂಗ ಕಾರ್ಯದರ್ಶಿ ಹರ್ಷವರ್ಧನ್ ಶ್ರಿಂಗ್ಲಾ ಮತ್ತು ಇತಿಹಾಸಗಾರ್ತಿ ಮತ್ತು ಚಿಂತಕಿ ಡಾ.ಮೀನಾಕ್ಷಿ ಜೈನ್ ಅವರನ್ನು ರಾಜ್ಯಸಭೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಮನಿರ್ದೇಶನ ಮಾಡಿದ್ದಾರೆ.  ಮಹಾರಾಷ್ಟ್ರ ಮೂಲದ ನಿಕ್ಕಂ ಮುಂಬೈ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ಸರ್ಕಾರಿ ವಕೀಲರಾಗಿ ಸೇವೆ ಸಲ್ಲಿಸಿದ್ದಾರೆ. ಕೇರಳದ ಸಿ.ಸದಾನಂದನ್ ಮಾಸ್ಟರ್ ಅವರು, ಶಿಕ್ಷಣದಲ್ಲಿ ಸುದೀರ್ಘ ವೃತ್ತಿಜೀವನವನ್ನು ಹೊಂದಿದ್ದಾರೆ. ಅವರು ರಾಜಕೀಯ ಹಿಂಸಾಚಾರದಲ್ಲಿ ಎರಡೂ ಕಾಲುಗಳನ್ನು ಕಳೆದುಕೊಂಡಿದ್ದಾರೆ. ಶ್ರಿಂಗ್ಲಾ ಅವರು, ಅಮೆರಿಕ, ಬಾಂಗ್ಲಾದೇಶ ಮತ್ತು ಥಾಯ್ಲೆಂಡ್ ನಲ್ಲಿ ರಾಯಭಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರು ೨೦೨೩ ರಲ್ಲಿ ಭಾರತದ ಜಿ-೨೦ ಅಧ್ಯಕ್ಷತೆಯ ಮುಖ್ಯ ಸಂಯೋಜಕರಾಗಿ ಸೇವೆ ಸಲ್ಲಿಸಿದರು. ಜೈನ್ ಅವರು ದೆಹಲಿ ವಿಶ್ವವಿದ್ಯಾಲಯದ ಗಾರ್ಗಿ ಕಾಲೇಜಿನಲ್ಲಿ ಇತಿಹಾಸದ ಸಹಾಯಕ

ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ. ರಾಜ್ಯಸಭೆಗೆ ನಾಮ ನಿರ್ದೇಶನಗೊಂಡ ನಾಲ್ವರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ.

<><><><>

ಆಪರೇಷನ್ ಸಿಂದೂರ್ ಸಮಯದಲ್ಲಿ ಬ್ರಹ್ಮೋಸ್ ಕ್ಷಿಪಣಿ ಗಮನಾರ್ಹವಾಗಿ ಕಾರ್ಯನಿರ್ವಹಿಸಿದೆ. ಆಪರೇಷನ್ ಸಿಂದೂರ್ ನಂತರ ವಿದೇಶಗಳಲ್ಲಿ ಬ್ರಹ್ಮೋಸ್ ಕ್ಷಿಪಣಿಗಳಿಗೆ ಬೇಡಿಕೆ ಹೆಚ್ಚಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಉತ್ತರಪ್ರದೇಶದ ತಮ್ಮ ಸಂಸದೀಯ ಕ್ಷೇತ್ರ ಲಖನೌಗೆ ಎರಡು ದಿನಗಳ ಭೇಟಿಯಲ್ಲಿರುವ ಅವರು, ಇಂದು ರಾಷ್ಟ್ರೀಯ ಪಿಜಿ ಕಾಲೇಜಿನಲ್ಲಿ ಉತ್ತರಪ್ರದೇಶ ಮಾಜಿ ಮುಖ್ಯಮಂತ್ರಿ ಚಂದ್ರಬಾಬು ಗುಪ್ತಾ ಅವರ ಪ್ರತಿಮೆ ಅನಾವರಣಗೊಳಿಸಿದರು. ಈ ವೇಳೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ೧೪ ದೇಶಗಳು ಬ್ರಹ್ಮೋಸ್ ಕ್ಷಿಪಣಿಗಾಗಿ ಬೇಡಿಕೆ ಇಟ್ಟಿವೆ. ಲಖನೌದಲ್ಲಿ ತಯಾರಿಸಲಾದ ಬ್ರಹ್ಮೋಸ್ ಕ್ಷಿಪಣಿಗಳನ್ನು ಈ ದೇಶಗಳಿಗೆ ರವಾನಿಸಲಾಗುವುದು. ಅಲ್ಲದೇ ಇದು ರಾಜ್ಯದಲ್ಲಿ ಉದ್ಯೋಗ ಹೆಚ್ಚಿಸಲು ಸಹಾಯ ಮಾಡುತ್ತದೆ ಎಂದರು.

**ಧ್ವನಿ : ರಾಜನಾಥ್ ಸಇಂಗ್ (೨೩ ಸೆಕೆಂಡ್‌ಗಳು)**

<><><><>

ನಕಲಿ ಮತ್ತು ಕಳಪೆ ಗುಣಮಟ್ಟದ ರಸಗೊಬ್ಬರ ಸಮಸ್ಯೆಗಳ ವಿರುದ್ಧ ತಕ್ಷಣ ಮತ್ತು ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಸರ್ಕಾರ ನಿರ್ದೇಶನ ನೀಡಿದೆ. ಈ ಸಂಬಂಧ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದಾರೆ. ದೇಶಾದ್ಯಂತ ನಕಲಿ ರಸಗೊಬ್ಬರಗಳ ಮಾರಾಟ, ಕಾಳಸಂತೆಯಲ್ಲಿ ಸಬ್ಸಿಡಿ ರಸಗೊಬ್ಬರಗಳ ಮಾರಾಟ ಸೇರಿದಂತೆ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಯುವ ಉದ್ದೇಶದಿಂದ ಈ ಪತ್ರ ಬರೆಯಲಾಗಿದೆ. ಕೃಷಿ ಭಾರತದ ಆರ್ಥಿಕತೆಯ ಬೆನ್ನೆಲುಬು. ರೈತರ ಆದಾಯದಲ್ಲಿ ಸ್ಥಿರತೆಯನ್ನು ಖಚಿತಪಡಿಸಿಕೊಳ್ಳಲು ಸರಿಯಾದ ಸಮಯದಲ್ಲಿ ಮತ್ತು ಕೈಗೆಟಕುವ

ಬೆಲೆಯಲ್ಲಿ ಅವರಿಗೆ ಗುಣಮಟ್ಟದ ರಸಗೊಬ್ಬರಗಳನ್ನು ಒದಗಿಸುವುದು ಅತ್ಯಗತ್ಯ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

<><><><>

ಕಳೆದ ೧೦ ವರ್ಷಗಳಲ್ಲಿ ದೇಶದಲ್ಲಿ ಒಟ್ಟು ನೇರ ತೆರಿಗೆ ಸಂಗ್ರಹ - ಜಿಎಸ್‌ಟಿ ಶೇಕಡ ೨೭೪ ರಷ್ಟು ಬೆಳವಣಿಗೆ ಕಂಡಿದೆ. ೨೦೧೩-೧೪ ಮತ್ತು ೨೦೨೪-೨೫ರ ನಡುವೆ, ತೆರಿಗೆ ಇಲಾಖೆಯಿಂದ ನೀಡಲಾದ ಮರು ಪಾವತಿಗಳು ಶೇಕಡ ೪೭೪ ರಷ್ಟು ಹೆಚ್ಚಾಗಿದೆ. ತೆರಿಗೆ ಮರುಪಾವತಿಗಳನ್ನು ಮಾಡುವ ಸರಾಸರಿ ಸಮಯ ೨೦೧೩ರಲ್ಲಿ ೯೩ ದಿನಗಳಿಂದ ೨೦೨೪ರಲ್ಲಿ ಕೇವಲ ೧೫ ದಿನಗಳಿಗೆ ಇಳಿದಿದೆ. ಡಿಜಿಟಲ್ ಮೂಲಸೌಕರ್ಯವನ್ನು ಅಳವಡಿಸಿಕೊಂಡಿದ್ದರಿಂದ ಇದು ಸಾಧ್ಯವಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

<><><><>

ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್, ಅಮೆರಿಕದ ನಾನಾ ಕಡೆ ದಾಳಿ ನಡೆಸಿ, ೮ ಖಲಿಸ್ತಾನಿ ಭಯೋತ್ಪಾದಕರನ್ನು ಬಂಧಿಸಿದೆ. ಬಂಧಿತರಲ್ಲಿ ಪವಿತ್ತರ್ ಸಿಂಗ್ ಬಟಾಲಾ ಸಹ ಸೇರಿದ್ದಾನೆ. ಈತ ನಿಷೇಧಿತ ಬಬ್ಬರ್ ಖಾಲ್ಸಾ ಇಂಟರ್‌ನ್ಯಾಷನಲ್ ಸಂಘಟನೆಗೆ ಸೇರಿದ್ದು, ಭಯೋತ್ಪಾದಕ ಚಟುವಟಿಕೆಗಳಿಗಾಗಿ ಭಾರತದ ರಾಷ್ಟ್ರೀಯ ತನಿಖಾ ಸಂಸ್ಥೆಗೆ ಬೇಕಾಗಿದ್ದಾನೆ. ದಾಳಿ ವೇಳೆ ಬಂದೂಕುಗಳು, ಮದ್ದು-ಗುಂಡುಗಳು ಮತ್ತು ಹಣವನ್ನು ಎಫ್‌ಬಿಐ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಈ ಭಯೋತ್ಪಾದಕರು ಅಪಹರಣ, ಪಿತೂರಿ, ಸಾಕ್ಷಿಗಳ ಬೆದರಿಕೆ, ಮಾರಣಾಂತಿಕ ಹಲ್ಲೆ, ಗುಂಪು ಘರ್ಷಣೆಯಲ್ಲಿ ತೊಡಗಿದ್ದರು ಎಂಬ ಆರೋಪವಿದೆ.

<><><><>

ತೆಲುಗಿನ ಹಿರಿಯ ನಟ ಮತ್ತು ಮಾಜಿ ಶಾಸಕ ಕೋಟಾ ಶ್ರೀನಿವಾಸ್ ರಾವ್ ಹೈದರಾಬಾದ್‌ನ ತಮ್ಮ ನಿವಾಸದಲ್ಲಿಂದು ನಿಧನರಾಗಿದ್ದಾರೆ. ಅವರಿಗೆ ೮೩ ವರ್ಷ ವಯಸ್ಸಾಗಿತ್ತು. ಅವರ ನಿಧನಕ್ಕೆ

ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ. ತೆಲುಗಿನ ಅನೇಕ ಸಿನಿಮಾಗಳಲ್ಲಿ ಅವರು ಪೋಷಕ ನಟರಾಗಿ ನಟಿಸಿದ್ದರು. ಕೋಟಾ ಶ್ರೀನಿವಾಸ್ ರಾವ್ ಅವರ ಬಹುಮುಖ ಪ್ರತಿಭೆ ಸದಾ ಸ್ಮರಣೀಯ. ತಮ್ಮ ಅದ್ಭುತ ಅಭಿನಯದಿಂದ ತಲೆಮಾರುಗಳಿಂದ ಪ್ರೇಕ್ಷಕರನ್ನು ರಂಜಿಸಿದ್ದ ನಟ, ಸಮಾಜ ಸೇವೆಯಲ್ಲಿ ಮುಂಚೂಣಿಯಲ್ಲಿದ್ದರು. ಬಡವರು ಮತ್ತು ದೀನದಲಿತರ ಸಬಲೀಕರಣಕ್ಕಾಗಿ ಕೆಲಸ ಮಾಡಿದ್ದರು ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಸಂದೇಶದಲ್ಲಿ ಹೇಳಿದ್ದಾರೆ.

<><><><>

ಜಮ್ಮು-ಕಾಶ್ಮೀರದ ಕುಲ್ಗಾಂ ಜಿಲ್ಲೆಯ ಟಚ್ಲು ಪ್ರದೇಶದ ಬಳಿ ಶ್ರೀನಗರ-ಜಮ್ಮು ರಾಷ್ಟ್ರೀಯ ಹೆದ್ದಾರಿಯಲ್ಲಿ ಇಂದು ಮೂರು ಬಸ್‌ಗಳ ನಡುವೆ ಸಂಭವಿಸಿದ ಅಪಘಾತದಲ್ಲಿ ಕನಿಷ್ಠ ೧೭ ಅಮರನಾಥ ಯಾತ್ರಿಕರು ಗಾಯಗೊಂಡಿದ್ದಾರೆ. ಗಾಯಗೊಂಡವರೆಲ್ಲರೂ ಮಧ್ಯಪ್ರದೇಶದ ನಿವಾಸಿಗಳಾಗಿದ್ದು, ಇವರು ಬಾಲ್ಟಾಲ್ ಮೂಲ ಶಿಬಿರಕ್ಕೆ ತೆರಳುತ್ತಿದ್ದರು. ಅಪಘಾತದ ನಂತರ ಗಾಯಾಳುಗಳನ್ನು ಶೀಘ್ರವೇ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಯಿತು.

<><><><>

ವಿಂಬಲ್ಡನ್ ಟೆನಿಸ್ ಪಂದ್ಯಾವಳಿಯ ಪುರುಷರ ವಿಭಾಗದ ಫೈನಲ್‌ನಲ್ಲಿಂದು ವಿಶ್ವದ ನಂ.೧ ಆಟಗಾರ ಇಟಲಿಯ ಜನಿಕ್ ಸಿನ್ನರ್ ಎರಡನೇ ಶ್ರೇಯಾಂಕಿತ ಹಾಗೂ ಎರಡು ಬಾರಿಯ ಹಾಲಿ ಚಾಂಪಿಯನ್ ಸ್ಪೇನ್ ನ ಕಾರ್ಲೋಸ್ ಅಲ್ಕರಾಜ್ ಸೆಣಸಲಿದ್ದಾರೆ. ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಪಂದ್ಯ ಆರಂಭವಾಗಲಿದೆ.

<><><><>

ಲಂಡನ್‌ನ ಲಾರ್ಡ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದ ೪ನೇ ದಿನವಾದ ಇಂದು ಭಾರತದ ವಿರುದ್ಧ ಅತಿಥೇಯ ಇಂಗ್ಲೆಂಡ್

೨ನೇ ಇನ್ನಿಂಗ್ಸ್ ಆರಂಭಿಸಿದೆ. ಇತ್ತೀಚಿನ ವರದಿ ಬಂದಾಗ ಇಂಗ್ಲೆಂಡ್ ೪ ವಿಕೆಟ್ ನಷ್ಟಕ್ಕೆ ೧೫೦ ರನ್ ಮಾಡಿ ಆಡುತ್ತಿದೆ. ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ೩೮೭ ರನ್ ಮಾಡಿದ್ದು, ಭಾರತ ಕೂಡ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೩೮೭ ರನ್ ಮಾಡಿದೆ.

<><><><>

ಜಾರ್ಜಿಯಾದ ಬಟುಮಿಯಲ್ಲಿ ನಡೆಯುತ್ತಿರುವ ಫಿಡೆ ಮಹಿಳಾ ಚೆಸ್ ವಿಶ್ವ ಕಪ್‌ನ ೩ನೇ ಸುತ್ತಿನ ಆರಂಭಿಕ ಪಂದ್ಯಗಳನ್ನು ಗೆಲ್ಲುವ ಮೂಲಕ ಭಾರತೀಯ ಗ್ರಾಂಡ್ ಮಾಸ್ಟರ್‌ಗಳಾದ ವಂತಿಕಾ ಅಗರ್‌ವಾಲ್ ಮತ್ತು ದಿವ್ಯಾ ದೇಶ್‌ಮುಖ್ ಫ್ರಿ-ಕ್ವಾಟರ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಇನ್ನೊಂದೆಡೆ, ಅಗ್ರ ಶ್ರೇಯಾಂಕಿತೆ ಕೊನೆರೂ ಹಂಪಿ ಮತ್ತು ಚೆಸ್ ವೃತ್ತಿಪರರಾದ ಡಿ. ಹರಿಕಾ ಹಾಗೂ ಆರ್. ವೈಶಾಲಿ ಮೂರನೇ ಸುತ್ತಿನಲ್ಲಿ ಡ್ರಾ ಸಾಧಿಸಿದರು.

<><><><>

ಮುಂದಿನ ೪ ದಿನಗಳಲ್ಲಿ ಕರಾವಳಿ ಕರ್ನಾಟಕ, ಮಧ್ಯಪ್ರದೇಶ, ಗೋವಾ, ಕೇರಳ, ಜಮ್ಮು-ಕಾಶ್ಮೀರ ಮತ್ತು ಲಡಾಖ್‌ನಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ಇದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>